ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ : 2389
ಮಾನ್ಯ ಸದಸ್ಯರ ಹೆಸರು : ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ಸಚಿವರು : ಪ್ರವಾಸೋದ್ಯಮ, ಪರಿಸರ ಹಾಗೂ ಜೀವಿಶಾಸ್ತ್ರ, ಸಚಿವರು
ಉತ್ತರಿಸುವ ದಿನಾಂಕ : 29-03-2021

ಕ್ರ. ಸಂ.	ಪ್ರಶ್ನೆ	ಉತ್ತರ
(ಅ)	ಪ್ರವಾಸೋದ್ಯಮ ಅಭಿವೃದ್ಧಿಗೆ ಹೊಸದಾಗಿ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ; ಇದಕ್ಕಾಗಿ ಎಷ್ಟು ಹಣವನ್ನು ಮೀಸಲಿಡಲಾಗಿದೆ;	ಪ್ರವಾಸೋದ್ಯಮ ಅಭಿವೃದ್ಧಿಗೆ 2020-25 ರ ಪ್ರವಾಸೋದ್ಯಮ ನೀತಿಯಡಿ ಗುರುತಿಸಿರುವ ಪ್ರವಾಸೋದ್ಯಮಕ್ಕೆ ಸಂಬಂಧಿಸಿದ 18 ಉತ್ಪನ್ನಗಳಲ್ಲಿ ಹೂಡಿಕೆ ಮಾಡಲು ಮುಂದೆ ಬರುವ ಉದ್ಯಮಿಗಳಿಗೆ, ಇಲಾಖೆಯಿಂದ ಸಹಾಯಧನ, ರಿಯಾಯಿತಿ ಹಾಗೂ ಉತ್ತೇಜನಗಳನ್ನು ಒದಗಿಸಲು ಅನುವು ಮಾಡಿಕೊಳ್ಳಲಾಗಿದೆ. 2021-22 ರ ಆಯವ್ಯಯದಲ್ಲಿ ಪ್ರವಾಸೋದ್ಯಮ ಇಲಾಖೆಗೆ ರೂ.228.75 ಕೋಟಿಗಳನ್ನು ಒದಗಿಸಲಾಗಿದೆ.
ಆ)	ಕರ್ನಾಟಕದ ಯಾವ ಯಾವ ಪ್ರೇಕ್ಷಣೀಯ ಸ್ಥಳಗಳನ್ನು ಪ್ರವಾಸಿ ತಾಣವಾಗಿ ಅಭಿವೃದ್ಧಿ ಪಡಿಸಲು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ; (ವಿವರಗಳನ್ನು ನೀಡುವುದು).	ಪ್ರವಾಸೋದ್ಯಮ ನೀತಿ 2020-25ರಡಿ ರಾಜ್ಯದ 778 ಪ್ರವಾಸಿ ತಾಣಗಳನ್ನು ಗುರುತಿಸಲಾಗಿರುತ್ತದೆ. ಈ ಪ್ರವಾಸಿ ತಾಣಗಳಲ್ಲಿ ಅಗತ್ಯವಿರುವ ಪ್ರವಾಸಿ ಮೂಲಸೌಲಭ್ಯಗಳ ಆದ್ಯತೆಗನುಗುಣವಾಗಿ ಹಾಗೂ ಆಯವ್ಯಯದಲ್ಲಿ ಒದಗಿಸಿರುವ ಅನುದಾನದ ಲಭ್ಯತೆಗನುಗುಣವಾಗಿ ಪ್ರವಾಸಿ ತಾಣಗಳನ್ನು ಅಭಿವೃದ್ಧಿ ಪಡಿಸಲು ಕ್ರಮವಹಿಸಲಾಗುವುದು.
ಇ)	ಬೆಂಗಳೂರಿನ ರೇಸ್ ಕೋರ್ಸ್‌ನ್ನು ಹೊರವಲಯಕ್ಕೆ ಸ್ಥಳಾಂತರಿಸಿ ಆ ಜಾಗದಲ್ಲಿ ಸೌಂಡ್ ಅಂಡ್ ಲೈಟ್ ಅಳವಡಿಸಿ ಪ್ರವಾಸಿ ತಾಣವನ್ನಾಗಿ ಮಾಡಬೇಕೆಂದು ಹಿಂದೆ ತೀರ್ಮಾನ ಕೈಗೊಂಡಿದ್ದು ಆ ಯೋಜನೆ ಕಾರ್ಯಗತವಾಗುತ್ತದೆಯೇ?	ಈ ರೀತಿಯ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

ಸಂಖ್ಯೆ: ಟಿಓಆರ್ 112 ಟಿಡಿವಿ 2021.

(ಸಿ.ಪಿ. ಯೋಗೇಶ್ವರ)
ಪ್ರವಾಸೋದ್ಯಮ,
ಪರಿಸರ ಮತ್ತು ಜೀವಿಶಾಸ್ತ್ರ, ಸಚಿವರು.